## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಜಿ.ರಾಮಮೋಹನ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಗುಬ್ಬಿ ಇವರ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪಲೋಕಾಯುಕ್ತರವರಿಗೆ ವಹಿಸುವ ಬಗ್ಗೆ -ಆದೇಶ.

**ಓದಲಾಗಿದೆ:**

1. ನಿಬಂಧಕರು ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಬಿಡಿ/2818/2015/ಎಆರ್‌ಎಲ್‌ಒ-2, ದಿನಾಂಕ:25.5.2017
2. ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಬಿಡಿ/2818/2015/ಸನಿಕಾಸ-2, ದಿನಾಂಕ:21.5.2017

**ಪ್ರಸ್ತಾವನೆ:-**

ನಿಬಂಧಕರು ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:25.5.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತರವರ ದಿನಾಂಕ:21.5.2017 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಪರಿಶೀಲಿಸಲಾಗಿ, ಶ್ರೀ ಸಿ.ಹೆಚ್.ದೊಡ್ಡಯ್ಯ ಬಿನ್ ಲೇಟ್ ಹೊನ್ನದಾಸಪ್ಪ, ಚೇಳೂರು ಗ್ರಾಮ, ಗುಬ್ಬಿ ತಾಲ್ಲೂಕು ಇವರು ಲೋಕಾಯುಕ್ತ ಕಛೇರಿಗೆ ದೂರನ್ನು ಸಲ್ಲಿಸಿ, ಗುಬ್ಬಿ ತಾಲ್ಲೂಕು ಚೇಳೂರು ಗ್ರಾಮದಲ್ಲಿನ ನಿವೇಶನ ಸಂಖ್ಯೆ:434/8 ತಮಗೆ ಸೇರಿರುತ್ತದೆಯೆಂದು, ಸದರಿ ಜಾಗದಲ್ಲಿ ಅಪಾದಿತರಾದ ಶ್ರೀ ಎಂ.ಜಿ.ರಾಮಮೋಹನ್, ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಗುಬ್ಬಿ ಇವರು ಸಮುದಾಯ ಭವನ ನಿರ್ಮಾಣ ಮಾಡುತ್ತಿದ್ದುದ್ದನ್ನು ಗಮನಿಸಿ, ಸಮುದಾಯ ಭವನ ನಿರ್ಮಿಸಿದಂತೆ ಸಕ್ಷಮ ನ್ಯಾಯಾಲಯದಿಂದ ತಡೆಯಾಜ್ಞೆ ತರಲಾಗಿರುತ್ತದೆಯೆಂದು, ಅದರೆ ನ್ಯಾಯಾಲಯದ ತಡೆಯಾಜ್ಞೆ ಇದ್ದರೂ ಕಟ್ಟಡ ನಿರ್ಮಿಸಿರುತ್ತಾರೆಂದು ಆರೋಪಿಸಿ, ಸದರಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸದರಿ ದೂರಿನ ಕುರಿತು ಲೋಕಾಯುಕ್ತ ವಿಭಾಗವು ತನಿಖೆ ಕೈಗೊಂಡಿದ್ದು, ಅಪಾಧಿತರಾದ ಶ್ರೀ ಎಂ.ಜಿ.ರಾಮಮೋಹನ್ ಇವರಿಂದ ವಿವರಣೆ ಪಡೆದಿರುತ್ತದೆ. ಸದರಿಯವರು ಸಲ್ಲಿಸಿರುವ ವಿವರಣೆಯಲ್ಲಿ ದೂರುದಾರರು ಸಿವಿಲ್ ನ್ಯಾಯಾಲಯದಲ್ಲಿ ಸಲ್ಲಿಸಿರುವ ಓ.ಎಸ್. ಸಂಖ್ಯೆ:161/2010 ರಲ್ಲಿ ಅವರನ್ನು ಪ್ರತಿವಾದಿಯನ್ನಾಗಿ ಮಾಡಿರುವುದಿಲ್ಲವೆಂದು, ಅವರಿಗೆ ಸಿವಿಲ್ ನ್ಯಾಯಾಲಯದ ತಡೆಯಾಜ್ಞೆ ಪ್ರತಿ ಸ್ವೀಕೃತವಾಗದಿರುವುದರಿಂದ ಸಮುದಾಯ ಭವನ ಕಟ್ಟಡ ನಿರ್ಮಾಣವನ್ನು ಮುಂದುವರಿಸಿರುವುದಾಗಿ ತಿಳಿಸಿರುತ್ತಾರೆಂದು ವರದಿಯಲ್ಲಿ ತಿಳಿಸಲಾಗಿದೆ.

---2

ದೂರಿನ ಬಗ್ಗೆ ಪರಿಶೀಲಿಸಿರುವ ಮಾನ್ಯ ಉಪಲೋಕಾಯುಕ್ತರವರು ಅಪಾದಿತರಾದ ಶ್ರೀ ಎಂ.ಜಿ.ರಾಮ್‌ಮೋಹನ್, ಸ.ಕಾ.ಇಂ ಇವರು ಸಮುದಾಯ ಭವನ ನಿರ್ಮಾಣ ಮಾಡುವ ಸ್ಥಳವು ದೂರುದಾರರಿಗೆ ಸೇರಿರುವುದಿಲ್ಲವೆಂಬ ಬಗ್ಗೆ ಸಂಬಂಧಿಸಿದ ಗ್ರಾಮ ಪಂಚಾಯತ್‌ನಿಂದ ಖಚಿತಪಡಿಸಿಕೊಂಡ ನಂತರ ಕಾಮಗಾರಿಯನ್ನು ಪ್ರಾರಂಭಿಸಬೇಕಾಗಿತ್ತೆಂದು, ಸದರಿಯವರ ಸಿವಿಲ್ ನ್ಯಾಯಾಲಯದ ಆದೇಶ ತಲುಪಿಸಿರುವುದಿಲ್ಲವೆಂಬ ತಾಂತ್ರಿಕ ಕಾರಣವನ್ನು ನೀಡಿ, ಕಾಮಗಾರಿಯನ್ನು ಮುಂದುವರಿಸಿರುವುದು ನ್ಯಾಯಾಲಯದ ಆದೇಶದ ಉಲ್ಲಂಘನೆಯಾಗಿದ್ದು, ಸದರಿಯವರು ನೀಡಿರುವ ಉತ್ತರವು ಇಲಾಖಾ ವಿಚಾರಣೆಯನ್ನು ಕೈ ಬಿಡಲು ಸೂಕ್ತ ಸಮಾದನಕರವಾಗಿರುವುದಿಲ್ಲವೆಂದು ಅಪಾಧಿತರು ಸರ್ಕಾರಿ ನೌಕರರಾಗಿದ್ದು, ಅವರ ಕಾರ್ಯನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಟೆ ಹಾಗೂ ಪ್ರಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ನಡೆದು ಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಯೆಂದು ಇದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ3(1) ರ ಉಲ್ಲಂಘನೆಯಾಗಿದ್ದು, ಅಪಾದಿತರ ವಿರುದ್ಧ ವಿವರವಾದ ಇಲಾಖೆ ವಿಚಾರಣೆಯನ್ನು ಕೈಗೊಳ್ಳಲು ತಮ್ಮಗೆ ವಹಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದ್ದು ಸಮುದಾಯ ಭವನ ನಿರ್ಮಾಣ ಮಾಡಲು ಉದ್ದೇಶಿಸಿರುವ ಜಾಗವು ಸಂಬಂದಿಸಿದ ಗ್ರಾಮ ಪಂಚಾಯತ್‌ನ ಸುಪರ್ದಿಯಲ್ಲಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳದೇ ಕಾಮಗಾರಿಯನ್ನು ಪ್ರಾರಂಭಿಸಿರುವುದು ಹಾಗೂ ಮಾನ್ಯ ಸಿವಿಲ್ ನ್ಯಾಯಾಲಯದ ತಡೆಯಾಜ್ಞೆ ಇದ್ದರೂ ಕಾಮಗಾರಿಯನ್ನು ಮುಂದುವರಿಸಿರುವುದು ಕಂಡು ಬಂದಿರುತ್ತದೆ. ಶ್ರೀ ಎಂ.ಜಿ.ರಾಮ್‌ಮೋಹನ್ ನೀಡಿರುವ ವಿವರಣೆಯಲ್ಲಿ ಸಿವಿಲ್ ನ್ಯಾಯಾಲಯದ ತಡೆಯಾಜ್ಞೆಯ ಮಾಹಿತಿಯು ತಮಗೆ ಇರುವುದಿಲ್ಲವೆಂದು, ಆದ್ದರಿಂದ ಕಾಮಗಾರಿಯನ್ನು ಮುಂದುವರಿಸಲಾಗಿದೆ ಎಂದು ನೀಡಿರುವ ಕಾರಣವು ಒಪ್ಪುವಂತದ್ದಾಗಿರುವುದಿಲ್ಲ. ಸರ್ಕಾರದ ಯೋಜನೆಯ ಹಣವನ್ನು ಬೇಜವಬ್ದಾರಿತನದಿಂದ ಗ್ರಾಮ ಪಂಚಾಯತ್ ಸುಪರ್ದಿಗೆ ಒಳಪಟ್ಟಿರುವ ಬಗ್ಗೆ ಖಚಿತಪಡಿಸಿಕೊಳ್ಳದೆ ಸಮುದಾಯ ಭವನ ನಿರ್ಮಿಸಲು ವೆಚ್ಚ ಮಾಡಿರುವ ಕ್ರಮವು ಆಕ್ಷೇಪಾರ್ಹ ಹಾಗೂ ಗಂಭೀರವಾದ ಕರ್ತವ್ಯಲೋಪ ಮತ್ತು ದುರ್ನಡತೆಯಾಗಿರುತ್ತದೆ. ಈ ರೀತಿಯಾಗಿ, ಶ್ರೀ ಎಂ.ಜಿ.ರಾಮಮೋಹನ್, ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಗುಬ್ಬಿ ಇವರ ಸರ್ಕಾರಿ ನೌಕರರಾಗಿದ್ದು ಅವರು ತಮ್ಮ ಹುದ್ದೆಯ ಕರ್ತವ್ಯವನ್ನು ಶ್ರದ್ದೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸದಿರುವುದರಿಂದ ಅವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖೆ ವಿಚಾರಣೆಯನ್ನು ನಡೆಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

<u>ಆದೇಶ ಸಂಖ್ಯೆ:ಗ್ರಾಅಪ 60 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:10.8.2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎಂ.ಜಿ.ರಾಮಮೋಹನ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಗುಬ್ಬಿ ಇವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ

---3

ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ 11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ-14(ಎ) ರಂತೆ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 10/08/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಎ.ಆರ್.ಎಲ್.ಓ -2, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರ ರವರ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್) /ಅಪರ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.